# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 501 |
| ಮಾನ್ಯ ಸದಸ್ಯರ ಹೆಸರು | ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 30.01.2026 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಸ್ಥಾಪಿತವಾದ ಹಾಸ್ಟೆಲ್‌ಗಳ ಸಂಖ್ಯೆ ಕಡಿಮೆ ಇದ್ದು, ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚು ಇರುವುದರಿಂದ ಹೆಚ್ಚುವರಿ ಹಾಸ್ಟೆಲ್ ನೀಡಬೇಕೆಂಬ ಬೇಡಿಕೆಯನ್ನು ಇನ್ನೂ ಈಡೇರಿಸದೆ ಇರಲು ಕಾರಣಗಳೇನು; | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 21 ಮೆಟ್ರಿಕ್ ಪೂರ್ವ ಹಾಗೂ 61 ಮೆಟ್ರಿಕ್ ನಂತರದ ಹೀಗೆ ಒಟ್ಟು 82 ವಿದ್ಯಾರ್ಥಿನಿಲಯಗಳು ಹಾಗೂ ಉಡುಪಿ ಜಿಲ್ಲೆಯಲ್ಲಿ 18 ಮೆಟ್ರಿಕ್ ಪೂರ್ವ ಹಾಗೂ 29 ಮೆಟ್ರಿಕ್ ನಂತರದ ಹೀಗೆ ಒಟ್ಟು 47 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ.<br>2025-26ನೇ ಸಾಲಿನಲ್ಲಿ 62 ಮೆಟ್ರಿಕ್ ನಂತರದ ಇಂಜಿನಿಯರಿಂಗ್ ಮತ್ತು ಮೆಡಿಕಲ್ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಲಾಗಿದ್ದು, ಈ ಪೈಕಿ ದಕ್ಷಿಣ ಕನ್ನಡ ಜಿಲ್ಲೆಗೆ ಒಂದು ಬಾಲಕರ ಮತ್ತು ಒಂದು ಬಾಲಕಿಯರ ಹಾಗೂ ಉಡುಪಿ ಜಿಲ್ಲೆಗೆ ಒಂದು ಬಾಲಕರ ಹಾಗೂ ಒಂದು ಬಾಲಕಿಯರ ಮೆಟ್ರಿಕ್ ನಂತರದ ಇಂಜಿನಿಯರಿಂಗ್ ಮತ್ತು ಮೆಡಿಕಲ್ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಿ ಪ್ರಾರಂಭಿಸಲು ಕ್ರಮವಹಿಸಲಾಗಿದೆ.<br>ಉಡುಪಿ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ 100 ಸಂಖ್ಯಾಬಲದ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡುವ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯು ತಿರಸ್ಕರಿಸಿದೆ. |
| ಆ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನಡೆಯುವ ಹಾಸ್ಟೆಲ್‌ಗಳಲ್ಲಿ ಇನ್ನೂ 1500 ವಿದ್ಯಾರ್ಥಿಗಳಿಗೆ ಸೀಟುಗಳು ಬೇಕಾಗಿದ್ದು, ಕೈಗೊಂಡಿರುವ ಕ್ರಮಗಳೇನು; | ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಹೆಚ್ಚಿನ ಬೇಡಿಕೆಯಿರುವ ಹಿನ್ನಲೆಯಲ್ಲಿ ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರಕ್ಕೆ ಹೊಸದಾಗಿ 100 ಸಂಖ್ಯಾಬಲದ 2 ಮೆಟ್ರಿಕ್ ನಂತರದ ಬಾಲಕರ ಹಾಗೂ 2 ಬಾಲಕಿಯರ ಹೀಗೆ ಒಟ್ಟು 04 ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. |
| ಇ) | ಹೆಚ್ಚುವರಿ ಹಾಸ್ಟೆಲ್‌ಗಳನ್ನು ನೀಡುವ ಭರವಸೆ ನೀಡಿದ್ದರೂ, ಇನ್ನೂ ಕಾರ್ಯಗತಗೊಳಿಸದೇ ಇರಲು ಕಾರಣಗಳೇನು; | |

| | | |
|---|---|---|
| ಈ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ನಡೆಸುವ ಹಾಸ್ಟೆಲ್‌ಗಳಲ್ಲಿರುವ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಬೇಡಿಕೆ ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 21 ಮೆಟ್ರಿಕ್ ಪೂರ್ವ ಹಾಗೂ 61 ಮೆಟ್ರಿಕ್ ನಂತರದ ಹೀಗೆ ಒಟ್ಟು 82 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳ ವಿವರ ಈ ಕೆಳಕಂಡಂತಿದೆ. |

| **ವಿದ್ಯಾರ್ಥಿ ನಿಲಯ ವಿಧ** | **ವಿದ್ಯಾರ್ಥಿ ನಿಲಯಗಳ ಸಂಖ್ಯೆ** | **ಮಂಜೂರಾತಿ ಸಂಖ್ಯೆ** | **ಸ್ವೀಕೃತವಾದ ಅರ್ಜಿಗಳ ಸಂಖ್ಯೆ** | **ಪ್ರವೇಶ ಪಡೆದ ಅರ್ಜಿಗಳ ವಿವರ** | | | **ಬಾಕಿ ಉಳಿದ ಅರ್ಜಿಗಳ ವಿವರ** |
|---|---|---|---|---|---|---|---|
| | | | | **ನವೀಕರಣ** | **ಹೊಸದು** | **ಒಟ್ಟು** | |
| ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು | 21 | 1005 | 627 | 635 | 365 | 1000 | 262 |
| ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು | 61 | 7726 | 4970 | 4035 | 3251 | 7286 | 1719 |
| **ಒಟ್ಟು** | **82** | **8731** | **5597** | **4670** | **3616** | **8286** | **1981** |

ಸಂಖ್ಯೆ:ಹಿಂವಕ 110 ಬಿಎಂಎಸ್ 2026

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು